(ಇಂದು ದಿನಾಂಕ:26-03-2026 ರಂದು ಸಾಕ್ಷಿದಾರರನ್ನು ಕರೆಯಿಸಲಾಯಿತು, ಪ್ರಮಾಣ ವಚನ ಬೋಧಿಸಲಾಯಿತು)

**ಮುಖ್ಯ ವಿಚಾರಣೆ: ಎದುರುದಾರರ ನಂ.2 ರವರ ಪರ ಶ್ರೀ ಯು ಕೆ ವಾಯ್ ವಕೀಲರಿಂದ :-**

ಮುಖ್ಯ ವಿಚಾರಣೆ ಪ್ರಮಾಣ ಪತ್ರ ಸಲ್ಲಿಸಿದ್ದೇನೆ. ಪ್ರಮಾಣ ಪತ್ರದಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ.

**ಪಾಟೀ ಸವಾಲು: ಅರ್ಜಿದಾರ ಪರ ಶ್ರೀ ಎಸ್?ಬಿ ವಕೀಲರಿಂದ**

1. ಅಪಘಾತದ ದಿನ ಅಪಘಾತವನ್ನು ನಾನೇ ಮಾಡಿರುತ್ತೇನೆ ಎಂದು ದೂರುದಾರರು ದೂರು ಸಲ್ಲಿಸಿರುತ್ತಾರೆ ಎಂದರೆ ಸರಿ. ಪೋಲೀಸರು ನನ್ನ ಮೇಲೆ ಆರೋಪಿ ಅಂತಾ ದೋ.ಪ. ಸಲ್ಲಿಸಿರುತ್ತಾರೆ ಎಂದರೆ ಸರಿಯಲ್ಲ. ನನ್ನ ತಪ್ಪು ಇರುವುದಿಲ್ಲ ಅಂತಾ ತೋರಿಸಲು ನಾನು ಪೋಲೀಸರಿಗೆ ಅರ್ಜಿಯನ್ನು ಸಲ್ಲಿಸಿರುತ್ತೇನೆ. ಈ ದಿನ ಅರ್ಜಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೀರಾ ಎಂದರೆ, ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ. ಅಪಘಾತ ನನ್ನ ತಪ್ಪಿನಿಂದ ಆಗಿದ್ದು, ಪರಿಹಾರ ಕೊಡಬೇಕಾಗುತ್ತದೆ ಇಲ್ಲ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನೇ ಬಸ್‌ನ್ನು ನಿರ್ಲಕ್ಷತನದಿಂದ ನಡೆಸಿದ್ದರಿಂದ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯನ್ನು ವಿಚಾರಿಸಿ ನಂತರ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ. ಸರಿ ಇದೆ,

ಸಹಿ/-
ಹಿರಿಯ ಸಿವಿಲ್ ನ್ಯಾಯಾಧೀಶರು,
ಸಿಂಧನೂರು